**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 289/2017** **CW**–37 **PW**–9

**ಸಾಕ್ಷಿಯನ್ನು ದಿಃ 28.01.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಕೆ ಎಂ ವಸಂತ |
| ತಂದೆಯ ಹೆಸರುಃ | ಮರಿಗೌಡ |
| ವಯಸ್ಸುಃ | 47 ವರ್ಷ |
| ವೃತ್ತಿಃ | ಸಿ ಪಿ ಐ ಅರಕಲಗೂಡು ವೃತ್ತ, ಅರಕಲಗೂಡು |
| ವಾಸ ಸ್ಥಳಃ | ಅರಕಲಗೂಡು |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು ಸೆಪ್ಟೆಂಬರ್ 2016 ರಿಂದ ನವೆಂಬರ್ 2017 ರವರೆಗೆ ನಾನು ಚನ್ನರಾಯಪಟ್ಟಣ ಚನ್ನರಾಯಪಟ್ಟಣದ ವೃತ ನೀರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 19.09.2016 ರಂದು ಈ ಕೇಸಿನ ಕಡತವನ್ನು ಚಾಸಾ–36 ರವರಿಂದ ಪಡೆದು ಪರಿಶೀಲಿಸಿರುತ್ತೇನೆ.

ಅದೇ ದಿನ ಚಾಸಾ–3 ರಿಂದ ಚಾಸಾ–6 ರವರ ಗಾಯದ ಪ್ರಮಾಣ ಪತ್ರಗಳನ್ನು ಚಾಸಾ–29 ರವರಿಂದ ಪಡೆದಿರುತ್ತೇನೆ.

ಸಾಕ್ಷಿ ಗಾಯದ ಪ್ರಮಾಣ ಪತ್ರಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ–9 ರಿಂದ ನಿಪಿ–12 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ–9(ಎ) ಯಿಂದ ನಿಪಿ–12(ಎ) ಎಂದು ಗುರುತಿಸಲಾಯಿತು.

ದಿಃ 23.11.2016 ರಂದು ಚಾಸಾ–3 ರಿಂದ ಚಾಸಾ–6 ರವರ ಹೇಳಿಕೆ ಪಡೆದಿರುತ್ತೇನೆ.

ಚಾಸಾ-3 ಮತ್ತು ಚಾಸಾ-4 ರವರ ಹೇಳಿಕೆಗಳನು ನಿಪಿ-1 ಮತ್ತು ನಿಪಿ-3 ರಂತೆ ಪಡೆದಿರುತ್ತೇನೆ.

ಅದೇದಿನ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿಯ ವಿರುದ್ದ ದೊಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಮ್ ಎಸ್ ಪಿ ರವರಿಂದ ಃ**

ನಾನು ತನಿಖೆಯ ಕಾಲದಲ್ಲಿ ಘಟನಾ ಸ್ಥಳಕ್ಕೆ ಭೇಟಿ ನೀಡಿಲ್ಲ. ನಾನು ಸಾಕ್ಷಿದಾರರ ಹೇಳಿಕೆಯನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನಮ್ಮ ತನಿಖೆಯಲ್ಲಿ ಅಪಘಾತವು ಆಟೋ ಚಾಲಕನ ತಪ್ಪಿನಿಂದ ಆಗಿರುತ್ತದೆ ಎಂದು ಕಂಡುಬಂದಿದ್ದರೂ ಆರೋಪಿಯ ವಿರುದ್ದ ಸಳ್ಳು ತನಿಖೆ ಮಾಡಿ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**